ದಿನಾಂಕ 14.09.2023 ರಂದು ಸಾಕ್ಷಿಗೆ ಕ್ರಮಬದ್ಧವಾಗಿ ಪ್ರಮಾಣ ವಚನವನ್ನು ಬೋಧಿಸಲಾಯಿತು.

ಮುಖ್ಯ ವಿಚಾರಣೆ ವಾದಿ ಪರ ವಕೀಲರಿಂದಃ-

ನಾನು ಈಗ ಹಾಜರುಪಡಿಸಿದ ಪ್ರಮಾಣ ಪತ್ರವನ್ನು ನನ್ನ ಮುಖ್ಯ ವಿಚಾರಣೆಯನ್ನಾಗಿ ಪರಿಗಣಿಸಲು ಕೋರುತ್ತೇನೆ. ಪ್ರಮಾಣ ಪತ್ರದಲ್ಲಿನ ಎಲ್ಲಾ ಅಂಶಗಳು ಸತ್ಯವಾಗಿವೆ ಮತ್ತು ಅದರಲ್ಲಿ ನನ್ನ ಸಹಿ ಇರುತ್ತದೆ ಎಂದು ಪ್ರಮಾಣೀಕರಿಸುತ್ತೇನೆ.

ನಮ್ಮ ಕುಟುಂಬದ ವಂಶವೃಕ್ಷ ಪ್ರಮಾಣಪತ್ರವನ್ನು ನಿಪಿ-1, 24 ಕೈಬರಹ ಪಹಣಿಗಳ ಯಥಾ ನಕಲುಗಳನ್ನು ಕ್ರಮವಾಗಿ ನಿಪಿ-2 ರಿಂದ ನಿಪಿ-25, 10 ಪಹಣಿಗಳ ಆನ್‌ಲೈನ್ ಪ್ರತಿಗಳನ್ನು ಕ್ರಮವಾಗಿ ನಿಪಿ-26 ರಿಂದ ನಿಪಿ-35, ಡಿಮ್ಯಾಂಡ್ ರಿಜಿಸ್ಟರ್ ಎಕ್ಸ್ಟ್ರಾಕ್ಟ್ ನ ಯಥಾ ನಕಲನ್ನು ನಿಪಿ-36, ದಿನಾಂಕ 31.08.1998 ರ ಕ್ರಯಪತ್ರದ ದೃಢೀಕೃತ ನಕಲನ್ನು ನಿಪಿ-37, ದಿನಾಂಕ 25.03.2006 ರ ಕ್ರಯಪತ್ರದ ದೃಢೀಕೃತ ನಕಲನ್ನು ನಿಪಿ-38, ಎಂ.ಆರ್ ನಂ.8/1998-99 ರ ಯಥಾ ನಕಲನ್ನು ನಿಪಿ-39, ಎಂ.ಆರ್ ನ.28/1998-99 ರ ಯಥಾ ನಕಲನ್ನು ನಿಪಿ-40, ಎಂ.ಆರ್ ನಂ.3/1993-94 ರ ಆನ್‌ಲೈನ್ ಪ್ರತಿಯನ್ನು ನಿಪಿ-41, ಎಂ.ಆರ್ ನಂ. 52/2005-06, ಎಂ.ಆರ್ ನಂ.ಟಿ-33/2014-15 ಗಳನ್ನು ಕ್ರಮವಾಗಿ ನಿಪಿ-42 ಮತ್ತು ನಿಪಿ-43, ನನ್ನ ಅತ್ತೆಯ ಮರಣ ಪ್ರಮಾಣಪತ್ರವನ್ನು ನಿಪಿ-44 ಎಂದು ಗುರುತಿಸಲಾಯಿತು.

ಮುಂದುವರೆದ ಮುಖ್ಯ ವಿಚಾರಣೆಯನ್ನು ಕೋರಿಕೆಯ ಮೇರೆಗೆ ಮುಂದೂಡಲಾಯಿತು.

(ಸಾಕ್ಷಿಯು ಕೊಟ್ಟ ಸಾಕ್ಷ್ಯವನ್ನು ಬಹಿರಂಗ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನಕ್ಕೆ ಗಣಕೀಕರಿಸಿದೆ)

(ಸಾಕ್ಷಿಗೆ ಸಾಕ್ಷ್ಯವನ್ನು ಓದಿ ಹೇಳಲಾಗಿ ಕೇಳಿ ಸರಿ ಇದೆ ಎಂದು ಒಪ್ಪಿದ್ದಾರೆ)

**(ಸರಸ್ವತಿ ಕೆ.ಎನ್.)**
ಪ್ರಧಾನ ಹಿರಿಯ ಸಿವಿಲ್ ನ್ಯಾಯಾಧೀಶರು,
ರಾಮನಗರ.